**Bangalore**
**Regional News**
**25.05.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಷ್ಟ್ರಪತಿ ಭವನದಲ್ಲಿ ಪದ್ಮ ಪ್ರಶಸ್ತಿ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು; ಇಂದು ರಾಜ್ಯದ 8 ಸಾಧಕರ ಪೈಕಿ ಮೂವರಿಂದ ಪ್ರಶಸ್ತಿ ಸ್ವೀಕಾರ
2. ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ಭೇಟಿ; ನಾಳೆ ಕಾಂಗ್ರೆಸ್ ಹೈಕಮಾಂಡ್‌ನ ಪ್ರಮುಖ ಸಭೆಯಲ್ಲಿ ಭಾಗಿ
3. ಅರಣ್ಯ ಭೂಮಿ ಒತ್ತುವರಿಯ ವಿಚಾರದಲ್ಲಿ ರಾಜ್ಯ ಸರ್ಕಾರ ಶೂನ್ಯ ಸಹಿಷ್ಣುತೆ – ಸಚಿವ ಈಶ್ವರ್ ಬಿ ಖಂಡ್ರೆ
4. ಬೆಳಗಾವಿ ಪಾಲಿಕೆಯಲ್ಲಿ ಕರ್ನಾಟಕ ಪರ ಗೊತ್ತುವಳಿಗೆ ಆಗ್ರಹ: ನಾಳೆ ಕನ್ನಡಪರ ಸಂಘಟನೆಗಳಿಂದ ಪ್ರತಿಭಟನೆ
5. ಬೆಂಗಳೂರು ನಗರದಲ್ಲಿ ಮುಂದಿನ ಕೆಲ ದಿನಗಳ ಕಾಲ ಮಳೆ ಸಾಧ್ಯತೆ; ಹವಾಮಾನ ಇಲಾಖೆಯಿಂದ ಯೆಲ್ಲೋ ಅಲರ್ಟ್ ಘೋಷಣೆ

---

ರಾಷ್ಟ್ರಪತಿ ಭವನದಲ್ಲಿ ಇಂದು ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ 2026ರ ಪದ್ಮ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು. ಇಬ್ಬರು ಸಾಧಕರಿಗೆ ಪದ್ಮವಿಭೂಷಣ, ಆರು ಸಾಧಕರಿಗೆ ಪದ್ಮಭೂಷಣ ಮತ್ತು 58 ಗಣ್ಯರಿಗೆ ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಲಾಯಿತು.

ಚಲನಚಿತ್ರ ನಟ ಧರ್ಮೇಂದ್ರ ಸಿಂಗ್ ಡಿಯೋಲ್ ಅವರಿಗೆ ಕಲಾ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಾಗಿ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿ ನೀಡಲಾಗಿದೆ. ಅವರ ಪತ್ನಿ ಮತ್ತು ಲೋಕಸಭಾ ಸಂಸದೆ ಹೇಮಾ ಮಾಲಿನಿ ಅವರು ಪ್ರಶಸ್ತಿ ಸ್ವೀಕರಿಸಿದರು. ಪಿಟೀಲು ವಾದಕ ಡಾ. ಎನ್. ರಾಜಮ್ ಅವರಿಗೆ ಪದ್ಮವಿಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇಂದು ನಡೆದ ಸಮಾರಂಭದಲ್ಲಿ ಕರ್ನಾಟಕದ ಮೂವರು ಸಾಧಕರಿಗೆ ರಾಷ್ಟ್ರಪತಿಗಳು ಪ್ರಶಸ್ತಿ ಪ್ರದಾನ ಮಾಡಿದರು. ಕಲಾ ಕ್ಷೇತ್ರದಲ್ಲಿ ನೀಡಿದ ಕೊಡಗುಗೆಗಾಗಿ ಶತಾವಧಾನಿ ಡಾ. ಆರ್. ಗಣೇಶ್ ಪದ್ಮಭೂಷಣ ಪ್ರಶಸ್ತಿ ಸ್ವೀಕರಿಸಿದರು. ಸಾಮಾಜಿಕ ಸೇವೆ ವಿಭಾಗದಲ್ಲಿ ಪುಸ್ತಕ ಮನೆ ಖ್ಯಾತಿಯ ಅಂಕೇಗೌಡ.ಎಂ ಮತ್ತು ಎಸ್.ಜಿ.ಸುಶೀಲಮ್ಮ ಅವರಿಗೆ ಪದ್ಮಶ್ರೀ ಪ್ರಶಸ್ತಿ ಸ್ವೀಕರಿಸಿದರು.

ಪದ್ಮಭೂಷಣ ವಿಭಾಗದಲ್ಲಿ, ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ಮತ್ತು ಮಹಾರಾಷ್ಟ್ರ ರಾಜ್ಯಪಾಲ ಭಗತ್ ಸಿಂಗ್ ಕೋಶ್ಯಾರಿ ಅವರಿಗೆ ಸಾರ್ವಜನಿಕ ವ್ಯವಹಾರಗಳ ಕ್ಷೇತ್ರದಲ್ಲಿನ ಸೇವೆಗಾಗಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಲಾಯಿತು.

ಕೈಗಾರಿಕೋದ್ಯಮಿ ಉದಯ್ ಸುರೇಶ್ ಕುಮಾರ್ ಕೋಟಕ್ ವ್ಯಾಪಾರ ಮತ್ತು ಕೈಗಾರಿಕೆಗಳಿಗೆ ನೀಡಿದ ಕೊಡುಗೆಗಾಗಿ ಪದ್ಮಭೂಷಣ ಪ್ರಶಸ್ತಿ ಪಡೆದರು, ಡಾ. ಕಲ್ಲಿಪಟ್ಟಿ ರಾಮಸಾಮಿ ಪಳನಿಸ್ವಾಮಿ, ವೈದ್ಯಕೀಯ ಕ್ಷೇತ್ರಕ್ಕೆ ನೀಡಿದ ಅತ್ಯುತ್ತಮ ಕೊಡುಗೆಗಾಗಿ ಪದ್ಮಭೂಷಣ ಪ್ರಶಸ್ತಿ ಪಡೆದರು.

ಇದೇ ವೇಳೆ ಕನ್ನಡಿಗಾರದ ಅಂಕೇಗೌಡರು, ಎಸ್.ಜಿ.ಸುಶೀಲಮ್ಮ ಅವರ ಜೊತೆಗೆ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್ ಪ್ರೀತ್ ಕೌರ್ ಸೇರಿದಂತೆ ಒಟ್ಟು 58 ಗಣ್ಯರು ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದರು.

ಸಮಾರಂಭದಲ್ಲಿ, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಅಮಿತ್ ಶಾ, ಸಚಿವರಾದ ಗಜೇಂದ್ರ ಸಿಂಗ್ ಶೇಖಾವತ್, ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಅನೇಕ ಸಚಿವರು ಉಪಸ್ಥಿತರಿದ್ದರು.

---

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನವದೆಹಲಿಯಲ್ಲಿ ನಾಳೆ ಕಾಂಗ್ರೆಸ್ ಹೈಕಮಾಂಡ್ ಕರೆದಿರುವ ಪ್ರಮುಖ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರು ತಮ್ಮನ್ನು ಸಭೆಗೆ ಆಹ್ವಾನಿಸಿದ್ದು, ಸಭೆಯ ನಿಖರವಾದ ವಿಷಯದ ಬಗ್ಗೆ ತಮಗೆ ಮಾಹಿತಿ ಇಲ್ಲ ಎಂದು ತಿಳಿಸಿದ್ದಾರೆ.

ನಾಯಕತ್ವ ಬದಲಾವಣೆಯ ಕುರಿತಾದ ಊಹಾಪೋಹಗಳು ರಾಜಕೀಯದಲ್ಲಿ ಸಹಜ ಎಂದು ಇದೇ ವೇಳೆ ತಿಳಿಸಿದ್ದಾರೆ. ಸಭೆಯಲ್ಲಿ ಭಾಗವಹಿಸಲು ಮುಖ್ಯಮಂತ್ರಿಗಳು ಹಿರಿಯ ಸಚಿವರೊಂದಿಗೆ ಇಂದು ಸಂಜೆಯೇ ದೆಹಲಿಗೆ ಪ್ರಯಾಣ ಬೆಳೆಸಲಿದ್ದಾರೆ.

ಮತ್ತೊಂದೆಡೆ, ಹೈಕಮಾಂಡ್ ಸೂಚಿಸಿದರೆ ತಾವೂ ಸಹ ದೆಹಲಿಗೆ ಭೇಟಿ ನೀಡುವುದಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಮುಂಬರುವ 2028ರ ಚುನಾವಣೆಯಲ್ಲೂ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವೇ ಮರಳಿ ಅಧಿಕಾರಕ್ಕೆ ಬರಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮೂಲಗಳ ಪ್ರಕಾರ, ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಹಿರಿಯ ನಾಯಕ ರಾಹುಲ್ ಗಾಂಧಿ ಅವರ ಸಮ್ಮುಖದಲ್ಲಿ ಹಿರಿಯ ನಾಯಕರ ಸಭೆ ನಡೆಯಲಿದ್ದು, ರಾಜ್ಯದ ಸಚಿವ ಸಂಪುಟ ವಿಸ್ತರಣೆ ಹಾಗೂ ಮುಂಬರುವ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆಗಳು ನಡೆಯುವ ನಿರೀಕ್ಷೆಯಿದೆ.

---

ಅರಣ್ಯ ಭೂಮಿ ಒತ್ತುವರಿಯ ವಿಚಾರದಲ್ಲಿ ರಾಜ್ಯ ಸರ್ಕಾರ ಶೂನ್ಯ ಸಹಿಷ್ಣತೆ ತಳೆದಿದ್ದು, ಹೊಸ ಒತ್ತುವರಿಗೆ ಅವಕಾಶ ನೀಡಬಾರದು ಮತ್ತು 2015ರ ನಂತರದ ಎಲ್ಲ ಒತ್ತುವರಿ ತೆರವು ಮಾಡಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಉಡುಪಿಯಲ್ಲಿಂದು ಅರಣ್ಯ ಮತ್ತು ಪರಿಸರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿರುವ ಸಚಿವರು, 2015ಕ್ಕೆ ಮೊದಲು ರಾಜ್ಯದಲ್ಲಿ ಒಟ್ಟು 2 ಲಕ್ಷ ಎಕರೆ ಅರಣ್ಯ ಭೂಮಿ ಒತ್ತುವರಿ ಆಗಿರುವುದಾಗಿ ಪ್ರಮಾಣ ಪತ್ರ ಸಲ್ಲಿಸಲಾಗಿದೆ. ಇದರಲ್ಲಿ ಜೀವನೋಪಾಯಕ್ಕಾಗಿ ಒತ್ತುವರಿ ಮಾಡಿರುವ ಅಂದರೆ ಪಟ್ಟಾ ಭೂಮಿ ಸೇರಿ 3 ಎಕರೆಗಿಂತ ಕಡಿಮೆ ಒತ್ತುವರಿ ಮಾಡಿರುವ ಕುಟುಂಬಗಳಿಗೆ ಸರ್ಕಾರ ಪರ್ಯಾಯ ವ್ಯವಸ್ಥೆ ಮಾಡುವವರೆಗೆ ತೆರವು ಮಾಡದಂತೆ ನಿರ್ಣಯಿಸಿದೆ. 3 ಎಕರೆಗಿಂತ ಹೆಚ್ಚಿನ ಒತ್ತುವರಿಯನ್ನು ತೆರವು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

---

ಮತದಾರರ ಪಟ್ಟಿಯಿಂದ ಅರ್ಹರ ಹೆಸರುಗಳು ಕೈಬಿಟ್ಟು ಹೋಗದಂತೆ ಜಾಗ್ರತೆ ವಹಿಸಲು ಬಿಎಲ್‌ಒಗಳು ನೀಡುವ ಎನ್ಯುಮರೇಷನ್ ಫಾರಂಗಳನ್ನು ಬಳಸಿ ಪಿಎಲ್‌ಎಗಳಿಗೆ ಸೂಕ್ತ ತರಬೇತಿ ನೀಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ದೇವನಹಳ್ಳಿಯಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿ.ಕೆ.ಶಿವಕುಮಾರ್, ಸಾರ್ವಜನಿಕ ಕಲ್ಯಾಣದ ದೃಷ್ಟಿಯಿಂದ ಅತ್ಯಂತ ಪ್ರಮುಖವಾಗಿರುವ ಎಸ್‌ಐಆರ್ ಯೋಜನೆ ಕುರಿತು ಸಾರ್ವಜನಿಕರು ಹಾಗೂ ಕಾರ್ಯಕರ್ತರಲ್ಲಿ ಜಾಗೃತಿ ಮೂಡಿಸಲು ಪಕ್ಷದ ವತಿಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಇದಕ್ಕೂ ಮುನ್ನ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅರ್ಹ ಫಲಾನುಭವಿಗಳ ದಾಖಲೆಗಳನ್ನು ಮರುಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿದರು. ಮೃತಪಟ್ಟವರ ಹೆಸರಿನಲ್ಲಿ ಹಣ ವರ್ಗಾವಣೆಯಾಗುತ್ತಿರುವುದು ಸೇರಿದಂತೆ ಸುಮಾರು 100 ಕೋಟಿಯಷ್ಟು ಹಣ ದುರುಪಯೋಗವಾಗುತ್ತಿರುವುದು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

ಯೋಜನೆಗಳು ನಿಜವಾದ ಫಲಾನುಭವಿಗಳಿಗೆ ತಲುಪುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಪ್ರತಿ ತಾಲೂಕಿನಲ್ಲೂ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಅವರು ಸ್ಪಷ್ಟಪಡಿಸಿದರು.

---

ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ಪರವಾದ ಗೊತ್ತುವಳಿಯನ್ನು ಅಂಗೀಕರಿಸಬೇಕೆಂದು ಆಗ್ರಹಿಸಿ ವಿವಿಧ ಕನ್ನಡಪರ ಸಂಘಟನೆಗಳು ನಾಳೆ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕುವ ಮೂಲಕ ಪ್ರತಿಭಟಸಲು ನಿರ್ಧರಿಸಿವೆ.

20ಕ್ಕೂ ಹೆಚ್ಚು ಸಂಘಟನೆಗಳು ಜಂಟಿಯಾಗಿ ಈ ಹೋರಾಟ ಹಮ್ಮಿಕೊಂಡಿದ್ದು, ಹಿರಿಯ ಮುಖಂಡರಾದ ವಾಟಾಳ್ ನಾಗರಾಜ್, ಸಾ.ರಾ.ಗೋವಿಂದು ಹಾಗೂ ಕೆ.ಆರ್.ಕುಮಾರ್ ನೇತೃತ್ವ ವಹಿಸಲಿದ್ದಾರೆ.

ಪ್ರತಿಭಟನೆಗೂ ಮುನ್ನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಹಲ್ಮಿಡಿ ಶಾಸನದ ಪ್ರತಿಕೃತಿಗೆ ಪವಿತ್ರ ನದಿಗಳ ಜಲ ಹಾಗೂ ಕ್ಷೀರಾಭಿಷೇಕ ನೆರವೇರಿಸಲಾಗುವುದು.

ಬೆಳಗಾವಿಯು ಕರ್ನಾಟಕದ ಅವಿಭಾಜ್ಯ ಅಂಗವಾಗಿದ್ದು, ಗಡಿ ವಿವಾದಕ್ಕೆ ಮಹಾಜನ್ ಆಯೋಗದ ವರದಿಯೇ ಅಂತಿಮ ಎಂಬ ಗೊತ್ತುವಳಿಯನ್ನು ಪಾಲಿಕೆ ತಕ್ಷಣವೇ ಅಂಗೀಕರಿಸಬೇಕು ಎಂದು ಕನ್ನಡಸೇನೆ–ಕರ್ನಾಟಕದ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ ಒತ್ತಾಯಿಸಿದ್ದಾರೆ.

---

ಸದೃಢ ಹಾಗೂ ಸ್ವಾಸ್ಥ್ಯ ಸಮಾಜ ನಿರ್ಮಿಸಲು ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಅತ್ಯಗತ್ಯ ಎಂದು ಉಚ್ಛ ನ್ಯಾಯಾಲಯದ ನ್ಯಾಯಾಧೀಶ ಹೆಚ್.ಪಿ.ಸಂದೇಶ್ ಹೇಳಿದ್ದಾರೆ.

ಚಿಕ್ಕಮಗಳೂರು ನಗರದಲ್ಲಿ ಇಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ವತಿಯಿಂದ ನಡೆದ ವಸತಿ ಶಾಲೆ ಮತ್ತು ಕಾಲೇಜುಗಳ ಪ್ರಾಂಶುಪಾಲರ ಆಡಳಿತ ಮತ್ತು ಶೈಕ್ಷಣಿಕ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಅಭಿವೃದ್ಧಿ ಹಾಗೂ ಪ್ರಗತಿಯ ನಿಜವಾದ ಅಳತೆಗೋಲು ಶಿಕ್ಷಣ. ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಅಕ್ಷರ, ಅನ್ನ ಮತ್ತು ಜ್ಞಾನದ ದಾಸೋಹ ನೀಡುವಲ್ಲಿ ಪ್ರಾಂಶುಪಾಲರ ಪಾತ್ರ ಬಹುಮುಖ್ಯವಾಗಿದೆ. ಪ್ರಸ್ತುತ ವಸತಿಶಾಲೆಗಳು ರಾಜ್ಯಮಟ್ಟದಲ್ಲಿ ಶೇಕಡಾ 99.57 ರಷ್ಟು ಅತ್ಯುತ್ತಮ ಫಲಿತಾಂಶ ಮಾಡಿರುವುದು ಹೆಮ್ಮೆಯ ವಿಚಾರ. ಈ ಸಾಧನೆಯ ಸಂಪೂರ್ಣ ಕೀರ್ತಿ ರಾಜ್ಯದ ಎಲ್ಲಾ ಪ್ರಾಂಶುಪಾಲರಿಗೆ ಸಲ್ಲಬೇಕು ಎಂದರು.

---

ದೇಶಾದ್ಯಂತ ಒಟ್ಟು 500 ಕಡೆಗಳಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾ ಅಭಿಯಾನವನ್ನು ನಡೆಸಲಾಗುವುದು ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ತಿಳಿಸಿದ್ದಾರೆ.

ಮೈಸೂರಿನ ಹೊರವಲಯದ ಪ್ರಜಾಪಿತ ಬ್ರಹ್ಮಕುಮಾರಿ ಆಶ್ರಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರಶಿಕ್ಷಣಾರ್ಥಿ ಅಭಿಯಾನಕ್ಕೆ ಚಾಲನೆ ನೀಡಿದರು.

---

ಮುಖ್ಯಮಂತ್ರಿಗಳ ಸಲಹೆ ಮೇರೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಓರ್ವ ಸಚಿವರಿಗೆ ಖಾತೆ ಮರು ಹಂಚಿಕೆ ಮಾಡಿ ಅಧಿಸೂಚನೆ ಹೊರಡಿಸಿದ್ದಾರೆ.

---

<u>ಇನ್ನು ಹವಾವರ್ತಮಾನ.</u>

**ರಾಜ್ಯಾದ್ಯಂತ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಪ್ರಮುಖ ಚಾಮರಾಜನಗರದಲ್ಲಿ 5, ಮಂಡ್ಯದ ಕೃಷ್ಣರಾಜ ಸಾಗರದಲ್ಲಿ 2 ಸೆಂಟಿಮೀಟರ್ ಮಳೆಯಾಗಿದೆ.**

**ಬೀದರ್‌ನಲ್ಲಿ ಗರಿಷ್ಠ 41.2 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.**

**ರಾಜ್ಯದ ಕರಾವಳಿಯ ಕೆಲವೆಡೆ, ಉತ್ತರ ಒಳನಾಡಿನ ಒಂದೆರಡು ಕಡೆ ಹಾಗೂ ದಕ್ಷಿಣ ಒಳನಾಡಿನ ಕೆಲವುಕಡೆ ನಾಳೆ ಮಳೆಯಾಗುವ ಸಾಧ್ಯತೆಯಿದೆ.**

**ಬೆಂಗಳೂರು ನಗರದಲ್ಲಿ ಮುಂದಿನ ಕೆಲ ದಿನಗಳ ಕಾಲ ಮಳೆ ಅಬ್ಬರ ಮುಂದುವರಿಯುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಇದೇ 29ರವರೆಗೆ ಯೆಲ್ಲೋ ಅಲರ್ಟ್ ಘೋಷಿಸಿದೆ.**

**ನಗರದಲ್ಲಿ ವಾರಪೂರ್ತಿ ಹಗುರದಿಂದ ಸಾಧಾರಣ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.**

**ಬಂಗಾಳಕೊಲ್ಲಿಯ ನೈಋತ್ಯ ಮತ್ತು ಪಕ್ಕದ ಪ್ರದೇಶಗಳಲ್ಲಿ ಮೇಲ್ಮುಖ ವಾಯು ಚಂಡಮಾರುತದ ಪ್ರಸರಣ ಉಂಟಾಗುವುದರಿಂದ ರಾಜ್ಯದಲ್ಲಿ ಮಳೆ ಹೆಚ್ಚಾಗಿದೆ. ಈ ಹವಾಮಾನ ಚಟುವಟಿಕೆಯಿಂದ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ವ್ಯಾಪಕ ಮಳೆಯಾಗುವ ಸಾಧ್ಯತೆ.**

___________ ಮುಕ್ತಾಯ ____________